ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿರುವ ಖಾಸಗಿ ಅನುದಾನ ರಹಿತ ಪ್ರಾಥಮಿಕ / ಪ್ರೌಢ ಶಿಕ್ಷಣ / ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳ ಕುರಿತು

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

833 (887) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳÀನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಖಾಸಗಿ ಅನುದಾನ ರಹಿತ ಪ್ರಾಥಮಿಕ/ ಪ್ರೌಢ ಶಿಕ್ಷಣ/ ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಸಿಬ್ಬಂದಿಗೆ ಮಾನವೀಯತೆ ದೃಷ್ಟಿಯಿಂದ ಉಚಿತವಾಗಿ ಆರೋಗ್ಯ ಕಾರ್ಡ್ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಹಾಗಿದ್ದಲ್ಲಿ, ಮುಂದಿನ ಶೈಕ್ಷಣಿಕ ವರ್ಷದಿಂದಲೇ ಜಾರಿಗೆ ತರಲಾಗುವುದೇ;

(ಉ) ಸರ್ಕಾರಿ ಶಾಲೆಯಲ್ಲಿ ಮಕ್ಕಳಿಗೆ ನೀಡುತ್ತಿರುವ ಸವಲತ್ತುಗಳನ್ನು ಖಾಸಗಿ ಅನುದಾನಿತ ಶಾಲೆಗಳಿಗೆ ನೀಡಲು ಸರ್ಕಾರಕ್ಕೆ ಇರುವ ತೊಂದರೆಯೇನು ?